# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಸಮಗ್ರ ಮಕ್ಕಳ ರಕ್ಷಣಾ ಯೋಜನೆಯ ಮಾರ್ಗಸೂಚಿಗಳನ್ವಯ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ರಚಿಸುವ ಕುರಿತು.

*ಓದಲಾಗಿದೆ:-*

1) ಆದೇಶ ಸಂಖ್ಯೆ: ಮಮಇ 71 ಮಭಾಬ 2009, ದಿನಾಂಕ: 15.06.2010.
2) ಆದೇಶ ಸಂಖ್ಯೆ: ಮಮಇ 81 ಎಸ್‌ಜೆಡಿ 2011, ದಿನಾಂಕ: 19.08.2011.
3) ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು ಇವರ ಪ್ರಸ್ತಾವನೆ ಸಂಖ್ಯೆ: ಮ.ಮ.ಅ.ಇ.: ಪಿಡಿಎಂ.: ಪಿಆಸು: ಡಿಸಿಪಿಯು: 10-11, ದಿನಾಂಕ: 17.03.2011 ಮತ್ತು ದಿನಾಂಕ: 06.09.2011.

*ಪ್ರಸ್ತಾವನೆ:-*

ಮೇಲೆ ಓದಲಾದ ಕ್ರಮಾಂಕ (1) ರ ಆದೇಶದಲ್ಲಿ ಬಾಲನ್ಯಾಯ ಕಾಯ್ದೆ, ಸಮಗ್ರ ಬೀದಿ ಮಕ್ಕಳ ಕಾರ್ಯಕ್ರಮ, ದತ್ತು ಕಾರ್ಯಕ್ರಮ ಮತ್ತು ಮಕ್ಕಳ ಸಹಾಯವಾಣಿ ಇತ್ಯಾದಿ ಯೋಜನೆಗಳನ್ನು ಒಂದುಗೂಡಿಸಿ ಕೇಂದ್ರ ಸರ್ಕಾರವು ಹೊರಡಿಸಿರುವ ಮಾರ್ಗಸೂಚಿಗಳನ್ವಯ ಸಮಗ್ರ ಮಕ್ಕಳ ಸಂರಕ್ಷಣಾ ಯೋಜನೆಯನ್ನು ದಿನಾಂಕ: 22.03.2010 ರಂದು ಕೇಂದ್ರ ಸರ್ಕಾರದೊಡನೆ ಮಾಡಿಕೊಂಡಿರುವ ಒಪ್ಪಂದದನ್ವಯ ಕರ್ನಾಟಕ ರಾಜ್ಯದಲ್ಲಿ ಅನುಷ್ಠಾನಗೊಳಿಸಲು ಮಂಜೂರಾತಿ ನೀಡಲಾಗಿದೆ.

ಮೇಲೆ ಓದಲಾದ ಕ್ರಮಾಂಕ (2) ರ ಆದೇಶದಲ್ಲಿ ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ಸೊಸೈಟಿ, ವಿಶೇಷ ದತ್ತು ಸಂಪನ್ಮೂಲ ಸಂಸ್ಥೆ ಹಾಗೂ 30 ಜಿಲ್ಲೆಗಳಿಗೆ ಪ್ರತಿ ಜಿಲ್ಲೆಗೆ ಒಂದರಂತೆ ಜಿಲ್ಲಾ ಮಕ್ಕಳ ರಕ್ಷಣಾ ಘಟಕಗಳಿಗೆ ಅವಶ್ಯವಿರುವ ವಿವಿಧ ವರ್ಗದ ಹುದ್ದೆಗಳನ್ನು ಸೃಜಿಸಿ ಸದರಿ ಹುದ್ದೆಗಳ ನೇಮಕಾತಿ ವಿಧಾನವನ್ನು ಸಹ ನಿರ್ದಿಷ್ಟಪಡಿಸಿ ಮಂಜೂರಾತಿ ನೀಡಲಾಗಿದೆ.

ಮೇಲೆ ಓದಲಾದ ಕ್ರಮಾಂಕ (3) ರ ಪತ್ರದಲ್ಲಿ ಸಮಗ್ರ ಮಕ್ಕಳ ರಕ್ಷಣಾ ಯೋಜನೆಯಡಿ ಪ್ರತಿ ಜಿಲ್ಲೆಯಲ್ಲಿ ಕಾರ್ಯಾಧ್ಯಕ್ಷರು/ಸದಸ್ಯರನ್ನೊಳಗೊಂಡಂತೆ ಜಿಲ್ಲಾ ಸಮಗ್ರ ಮಕ್ಕಳ ರಕ್ಷಣಾ ಘಟಕಗಳನ್ನು ರಚಿಸಿ ಮಂಜೂರಾತಿ ನೀಡಲು ದಿನಾಂಕ: 17.03.2011 ರಲ್ಲಿ ಪ್ರಸ್ತಾವನೆಯನ್ನು ಸಲ್ಲಿಸಲಾಗಿತ್ತು. ಸಮಗ್ರ ಮಕ್ಕಳ ರಕ್ಷಣಾ ಯೋಜನೆಯ ಮಾರ್ಗಸೂಚಿ ಅಧ್ಯಾಯ (3) ರ 5.1 ಮತ್ತು ಅಧ್ಯಾಯ (4) ರ 1.3 ರಲ್ಲಿ ತಿಳಿಸಿರುವಂತೆ **ಜಿಲ್ಲಾ ಮಕ್ಕಳ ರಕ್ಷಣಾ ಸಮಿತಿಯನ್ನು** ರಚಿಸಬೇಕಾಗಿದ್ದು, ಈ ಸಮಿತಿಯಲ್ಲಿನ ಸದಸ್ಯರನ್ನೇ **ಜಿಲ್ಲಾ ಸಮಗ್ರ ಮಕ್ಕಳ ರಕ್ಷಣಾ ಘಟಕಕ್ಕೆ** ಸೂಚಿಸಿದ್ದರಿಂದ ಸದಸ್ಯರ ಸಂಖ್ಯೆಯನ್ನು ಮಿತಿಗೊಳಿಸಲು ಹಾಗೂ ಆಡಳಿತ, ಆರ್ಥಿಕ ನಿರ್ವಹಣೆ ಮತ್ತು ಮೇಲ್ವಿಚಾರಣೆಗೆ ಒಳಪಡುವ ಅಧಿಕಾರಿ/ಇಲಾಖೆಗಳನ್ನು ಒಳಗೊಂಡಂತೆ ಜಿಲ್ಲಾ ಸಮಗ್ರ ಮಕ್ಕಳ ರಕ್ಷಣಾ ಘಟಕವನ್ನು ರಚಿಸುವುದು ಸೂಕ್ತವಾಗಿದ್ದು, ಅದರಂತೆ ದಿನಾಂಕ: 06.09.2011

2..

ಸಂಖ್ಯೆ 3123
ದಿನಾಂಕ 18/10/20..

ಎಂದು ಸಲ್ಲಿಸಿರುವ ಪರಿಷ್ಕೃತ ಪ್ರಸ್ತಾವನೆಗೆ ಮಂಜೂರಾತಿ ನೀಡುವಂತೆ ಮಹಿಳಾ ಮತ್ತು ಮಕ್ಕ ಅಭಿವೃದ್ಧಿ ಇಲ್ಲಾಖೆಯ ನಿರ್ದೇಶಕರು ಕೋರಿರುತ್ತಾರೆ.

**ಆದೇಶ ಸಂಖ್ಯೆ:ಮಮಇ 79 ಮಭಾಬ 2011, ಬೆಂಗಳೂರು, ದಿನಾಂಕ: 23.09.2011.**

ಮೇಲಿನ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಕೇಂದ್ರ ಪುರಸ್ಕೃತ ಸಮಗ್ರ ಮಕ್ಕಳ ರಕ್ಷಣಾ ಯೋಜನೆಯನ್ನು (ಐ.ಸಿ.ಪಿ.ಎಸ್) ಜಿಲ್ಲಾ ಮಟ್ಟದಲ್ಲಿ ಅನುಷ್ಠಾನಗೊಳಿಸಲು ಐ.ಸಿ.ಪಿ.ಎಸ್. ಮಾರ್ಗಸೂಚಿಗಳನ್ವಯ ಅನುಬಂಧ-I ರಲ್ಲಿ ವಿವರಿಸಿರುವಂತೆ ಕಾರ್ಯನಿರ್ವಹಿಸಲು ಪ್ರತಿ ಜಿಲ್ಲೆಯಲ್ಲಿ ಈ ಕೆಳಕಂಡ ಅಧಿಕಾರಿ/ಅಧಿಕಾರೇತರ ಸದಸ್ಯರನ್ನೊಳಗೊಂಡಂತೆ **ಜಿಲ್ಲಾ ಮಕ್ಕಳ ರಕ್ಷಣಾ ಘಟಕಗಳನ್ನು** ಈ ಆದೇಶ ಹೊರಡಿಸಿದ ದಿನಾಂಕದಿಂದ ಹಾಗೂ ಮುಂದಿನ ಆದೇಶದವರೆಗೆ ರಚಿಸಿ ಆದೇಶಿಸಿದೆ.

1. ಜಿಲ್ಲಾಧಿಕಾರಿಗಳು – ಅಧ್ಯಕ್ಷರು
2. ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾಪಂಚಾಯತ್ – ಉಪಾಧ್ಯಕ್ಷರು
3. **ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು** – ಸದಸ್ಯರು
4. ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ – ಸದಸ್ಯರು
5. ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ – ಸದಸ್ಯರು
6. ಜಿಲ್ಲಾ ಆರೋಗ್ಯ ಅಧಿಕಾರಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ. – ಸದಸ್ಯರು
7. ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು, ಸಮಾಜ ಕಲ್ಯಾಣ ಇಲಾಖೆ. – ಸದಸ್ಯರು
8. ಒಬ್ಬರು ಮಕ್ಕಳ ಕ್ಷೇತ್ರದಲ್ಲಿ ಅನುಭವವಿರುವ ಸ್ವಯಂ ಸೇವಾ ಸಂಸ್ಥೆಯ ನಾಮ ನಿರ್ದೇಶಿತ ಪ್ರತಿನಿಧಿ
(ಜಿಲ್ಲಾಧಿಕಾರಿಯವರಿಂದ ನಾಮನಿರ್ದೇಶಿತವಾದ ಸ್ವಯಂ ಸೇವಾ ಸಂಸ್ಥೆಯ ಪ್ರತಿನಿಧಿ. ಪ್ರತಿ ಎರಡು ವರ್ಷಕ್ಕೊಮ್ಮೆ ಹೊಸ ಸದಸ್ಯರನ್ನು ನಾಮನಿರ್ದೇಶನ ಮಾಡುವುದು.) – ಸದಸ್ಯರು
9. ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ, ಜಿಲ್ಲಾ ಸಮಗ್ರ ಮಕ್ಕಳ ರಕ್ಷಣಾ ಘಟಕ. – ಸದಸ್ಯ ಕಾರ್ಯದರ್ಶಿ

ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ವಿನ್ಯಾಸವನ್ನು ಅನುಬಂಧ-2 ರಂತೆ ಗುರುತಿಸಲಾಗಿದ್ದು, ಅನುಬಂಧ-3 ರಲ್ಲಿಯ ಆವರ್ತಕ ಮತ್ತು ಅನಾವರ್ತಕ ವೆಚ್ಚವನ್ನು ಭರಿಸಬಹುದಾಗಿರುತ್ತದೆ.

ಜಿಲ್ಲಾ ಮಕ್ಕಳ ರಕ್ಷಣಾ ಘಟಕಗಳು ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿಯ ಆಡಳಿತ ವ್ಯಾಪ್ತಿಗೆ ಒಳಪಟ್ಟಿರುತ್ತವೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಸ್.ಎನ್.ಕೃಷ್ಣಕುಮಾರ್)
ಸರ್ಕಾರದ ಅಧೀನ ಕಾರ್ಯದರ್ಶಿ-1,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ

ಇವರಿಗೆ:
ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸುವಂತೆ ಹಾಗೂ 500 ಪ್ರತಿಗಳನ್ನು ಒದಗಿಸುವಂತೆ ಕೋರಿದೆ.

ಪ್ರತಿ:

1) ಮಹಾಲೇಖಪಾಲರು (ಎ & ಇ), ಕರ್ನಾಟಕ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ಬೆಂಗಳೂರು.
3) ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
4) ಜಿಲ್ಲಾ ಮಕ್ಕಳ ರಕ್ಷಣಾ ಘಟಕಗಳ ಅಧ್ಯಕ್ಷರು/ಉಪಾಧ್ಯಕ್ಷರು/ಸದಸ್ಯ ಕಾರ್ಯದರ್ಶಿ/ಎಲ್ಲಾ ಸದಸ್ಯರು. (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ನಿರ್ದೇಶಕರ ಮುಖಾಂತರ)
5) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು

# ಕರ್ನಾಟಕ ಸರ್ಕಾರ

ಸಂಖ್ಯೆ: ಮಮಇ 152 ಮಭಾಬ 2013

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:24.09.2013.

## ಸೇರ್ಪಡೆ

ಸಮಗ್ರ ಮಕ್ಕಳ ರಕ್ಷಣಾ ಯೋಜನೆಯ ಮಾರ್ಗಸೂಚಿಗಳನ್ವಯ ಜಿಲ್ಲಾ ಮಕ್ಕಳ ರಕ್ಷಣಾ ಘಟಕವನ್ನು ರಚಿಸಿ ದಿನಾಂಕ:23.09.2011 ರಂದು ಹೊರಡಿಸಲಾದ ಆದೇಶ ಸಂಖ್ಯೆ:ಮಮಇ 79 ಮಭಾಬ 2011ರ ಆದೇಶ ಭಾಗದ ಕ್ರಮ ಸಂಖ್ಯೆ.9ರ ನಂತರ ಈ ಕೆಳಕಂಡ ಅಧಿಕಾರಿಗಳನ್ನು ಸಹ ಸೇರಿಸಿಕೊಂಡು ಓದಿಕೊಳ್ಳತಕ್ಕದ್ದು.

1. ಕಾರ್ಮಿಕ ಅಧಿಕಾರಿ, ಕಾರ್ಮಿಕ ಇಲಾಖೆ – ಸದಸ್ಯರು.
2. ಸದಸ್ಯ ಕಾರ್ಯದರ್ಶಿ / ಪ್ರತಿನಿಧಿ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ – ಸದಸ್ಯರು.
3. ಸದಸ್ಯರು, ಜಿಲ್ಲಾ ಪಂಚಾಯತಿ, (ಜಿಲ್ಲಾ ಪಂಚಾಯಿತಿಯ ಒಬ್ಬ ಮಹಿಳಾ ಸದಸ್ಯರು) – ಸದಸ್ಯರು.
4. ಸದಸ್ಯರು, ಮಹಾನಗರ ಪಾಲಿಕೆ/ನಗರ ಸಭೆ (ಮಹಾನಗರ ಪಾಲಿಕೆ/ನಗರ ಸಭೆಯ ಒಬ್ಬ ಮಹಿಳಾ ಸದಸ್ಯರು) – ಸದಸ್ಯರು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಂ.ಕೆ.ಜಂಬೆ)
ಸರ್ಕಾರದ ಅಧೀನ ಕಾರ್ಯದರ್ಶಿ-1,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖೆ.

ಇವರಿಗೆ,

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸುವಂತೆ ಹಾಗೂ 500 ಪ್ರತಿಗಳನ್ನು ಒದಗಿಸುವಂತೆ ಕೋರಿದೆ.

1) ಮಹಾಲೇಖಪಾಲರು (ಎ & ಇ), ಕರ್ನಾಟಕ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3) ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿ, ಬೆಂಗಳೂರು.
4) ಜಿಲ್ಲಾ ಮಕ್ಕಳ ರಕ್ಷಣಾ ಘಟಕಗಳ ಅಧ್ಯಕ್ಷರು/ಉಪಾಧ್ಯಕ್ಷರು/ಸದಸ್ಯ ಕಾರ್ಯದರ್ಶಿ/ಎಲ್ಲಾ ಸದಸ್ಯರು. (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ನಿರ್ದೇಶಕರ ಮುಖಾಂತರ)
5) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.